# All India Radio: Bangalore
# National Bulletins In Kannada
# 20.05.2025 / 7.35 am
## ಆಕಾಶವಾಣಿ, ಬೆಂಗಳೂರು
## ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

೧.ನವದೆಹಲಿಯಲ್ಲಿಂದು ಕೃಷಿ ವಿಶ್ವ ವಿದ್ಯಾಲಯಗಳ ಉಪಕುಲಪತಿಗಳು, ಐಸಿಎಆರ್ ನಿರ್ದೇಶಕರ ವಾರ್ಷಿಕ ಸಮ್ಮೇಳನ

೨.ಇದೇ ೨೫ರಂದು ಆಕಾಶವಾಣಿಯಲ್ಲಿ ಮನ್ ಕಿ ಬಾತ್

೩.ಭಯೋತ್ಪಾದನೆ ವಿರುದ್ಧ ಶೂನ್ಯ ಸಹಿಷ್ಣುತೆಗೆ ನೆದರ್ ಲ್ಯಾಂಡ್ ಬೆಂಬಲ : ವಿದೇಶಾಂಗ ವ್ಯವಹಾರಗಳ ಸಚಿವ ಜೈಶಂಂಕರ್ ಶ್ಲಾಘನೆ

೪.ಐಪಿಎಲ್ ಟಿ೨೦ ಕ್ರಿಕೆಟ್ : ಸನ್ ರೈಸಸ್ ಹೈದರಬಾದ್ ವಿರುದ್ಧ ಲಕ್ನೋ ಸೂಪರ್ ಜೈಂಟ್ಸ್ ಗೆ ಭರ್ಜರಿ ಗೆಲುವು.

***************

ದೇಶಾದ್ಯಂತ 'ವಿಕಸಿತ ಕೃಷಿ ಸಂಕಲ್ಪ ಅಭಿಯಾನ' ಈ ತಿಂಗಳ ೨೯ ರಿಂದ ಜೂನ್ ೧೨ ರವರೆಗೆ ಮುಂದುವರಿಯಲಿದೆ ಎಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ ನಡೆದ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ್ದಾರೆ. ಆಧುನಿಕ ತಂತ್ರಜ್ಞಾನ ಮತ್ತು ಹೊಸ ಬಿತ್ತನೆ ಬೀಜ ತಳಿಗಳ ಬಗ್ಗೆ ರೈತರಲ್ಲಿ ಜಾಗೃತಿ ಮೂಡಿಸುವುದು ಈ ಅಭಿಯಾನದ ಗುರಿಯಾಗಿದೆ ಎಂದರು. ಈ ಅಭಿಯಾನವು ದೇಶಾದ್ಯಂತ ೭೨೩ ಜಿಲ್ಲೆಗಳಲ್ಲಿ ನಡೆಯಲಿದ್ದು, ಸುಮಾರು ೧.೫ ಕೋಟಿ ರೈತರನ್ನು ತಲುಪಲಿದೆ. ಪ್ರಾಯೋಗಿಕ ಮತ್ತು ವೈಜ್ಞಾನಿಕ ಕೃಷಿ ತಂತ್ರಗಳಲ್ಲಿ ರೈತರಿಗೆ ತರಬೇತಿ ನೀಡಲು ವಿಜ್ಞಾನಿಗಳ ತಂಡಗಳ ಸುಮಾರು ೬೫ ಸಾವಿರ ಹಳ್ಳಿಗಳಿಗೆ ಭೇಟಿ ನೀಡಲಿದ್ದು, ಪ್ರತಿ ತಂಡವು ಪ್ರತಿದಿನ ಜಿಲ್ಲಾ ಮಟ್ಟದಲ್ಲಿ ಮೂರು ಸಭೆಗಳನ್ನು ನಡೆಸಲಿದೆ. ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ವಿಕಸಿತ ಭಾರತವನ್ನು ನಿರ್ಮಿಸಲು ಪರಿವರ್ತನಾ ಅಭಿಯಾನವನ್ನು ನಡೆಸಲಾಗುತ್ತಿದೆ. ಈ ಅಭಿಯಾನದಲ್ಲಿ ಪ್ರಮುಖವಾಗಿ ವಿಕಸಿತ ಕೃಷಿ, ವಿಕಸಿತ ಖೇತಿ, ಸಮೃದ್ಧ ಕಿಸಾನ್ ಗುರಿ ಹೊಂದಿದೆ ಎಂದು ಅವರು ತಿಳಿಸಿದರು. ೨೦೨೩-೨೪ರಲ್ಲಿ ಒಟ್ಟು ಆಹಾರ ಧಾನ್ಯ ಉತ್ಪಾದನೆಯು, ಸುಮಾರು ಒಂದು ಸಾವಿರದ ೫೫೭ ಲಕ್ಷ ಟನ್‌ಗಳಷ್ಟಿತ್ತು, ಇದು ೨೦೨೪-೨೫ರಲ್ಲಿ ಸುಮಾರು ಒಂದು ಸಾವಿರದ ೬೬೪ ಲಕ್ಷ ಟನ್‌ಗಳಿಗೆ ಏರಿಕೆಯಾಗಿದೆ ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ.

***************

ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರು ನವದೆಹಲಿಯಲ್ಲಿಂದು ಕೃಷಿ ವಿಶ್ವವಿದ್ಯಾಲಯಗಳ ಉಪಕುಲಪತಿಗಳು ಹಾಗೂ ಐಸಿಎಆರ್ ಸಂಸ್ಥೆಗಳ ನಿರ್ದೇಶಕರ ವಾರ್ಷಿಕ ಸಮ್ಮೇಳನವನ್ನು ಉದ್ಘಾಟಿಸಲಿದ್ದಾರೆ .'ಕ್ರಿಯೆಗಾಗಿ ಒಮ್ಮುಖ: ೨೦೪೭ ರಲ್ಲಿ ವಿಕಸಿತ ಭಾರತಕ್ಕಾಗಿ ಕೃಷಿ ಸಂಶೋಧನೆ, ಶಿಕ್ಷಣ ಹಾಗೂ ವಿಸ್ತರಣೆಯನ್ನು ರೂಪಿಸುವುದು' ಸಮ್ಮೇಳನದ ಘೋಷವಾಕ್ಯವಾಗಿದ್ದು, ಈ ಸಂದರ್ಭದಲ್ಲಿ, ಸಚಿವ ಚೌಹಾಣ್ ಅವರು ಭಾರತದ ಸುಸ್ಥಿರ ಅಭಿವೃದ್ಧಿಗಾಗಿ ರಾಷ್ಟ್ರೀಯ ಕೃಷಿ ಸಂಶೋಧನಾ ವ್ಯವಸ್ಥೆಯನ್ನು (ಎನ್‌ಎಆರ್‌ಎಸ್) ಮರುರೂಪಿಸುವ ಕುರಿತು ಉನ್ನತ ಮಟ್ಟದ ಸಮಿತಿಯ ಅಧ್ಯಕ್ಷತೆ ವಹಿಸಲಿದ್ದಾರೆ. ಸಮ್ಮೇಳನದಲ್ಲಿ ಕೇಂದ್ರ ಮೀನುಗಾರಿಕೆ, ಪಶುಸಂಗೋಪನೆ ಮತ್ತು ಹೈನುಗಾರಿಕೆ ಸಚಿವ ರಾಜೀವ್ ರಂಜನ್ ಸಿಂಗ್ ಮತ್ತು ಕೃಷಿ ಮತ್ತು ರೈತರ ಕಲ್ಯಾಣ ರಾಜ್ಯ ಸಚಿವ ಭಗೀರಥ ಚೌಧರಿ ಅವರು ಸಹ ಭಾಗವಹಿಸಲಿದ್ದಾರೆ.

***************

ಆರು ದಿನಗಳ ಕಾಲ ನೆದರ್ಲ್ಯಾಂಡ್ಸ್, ಡೆನ್ಮಾರ್ಕ್ ಮತ್ತು ಜರ್ಮನ್‌ಗೆ ಪ್ರವಾಸ ಕೈಗೊಂಡಿರುವ ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್.ಜೈಶಂಕರ್ ನೆದರ್ಲ್ಯಾಂಡ್ಸ್‌ನ ದಿ ಹೇಗ್‌ನಲ್ಲಿ ಡಚ್ ವಿದೇಶಾಂಗ ಸಚಿವ ಕ್ಯಾಸ್ಪರ್ ವೆಲ್ಡ್‌ಕ್ಯಾಂಪ್ ಅವರನ್ನು ಭೇಟಿಮಾಡಿ ಮಾತುಕತೆ ನಡೆಸಿದರು. ಉಭಯ ದೇಶಗಳ ದ್ವಿಪಕ್ಷೀಯ ಪಾಲುದಾರಿಕೆ ಹಾಗೂ ಯುರೋಪಿಯನ್ ಒಕ್ಕೂಟದೊಂದಿಗೆ ಬಾಂಧವ್ಯ ಬಲಪಡಿಸುವ ಬಗ್ಗೆ ವ್ಯಾಪಕ ಚರ್ಚೆ ನಡೆಸಿದ್ದಾಗಿ ಡಾ. ಜೈಶಂಕರ್ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ಪಹಲ್ಗಾಮ್ ದಾಳಿಯನ್ನು ನೆದರ್ಲ್ಯಾಂಡ್ ತೀವ್ರವಾಗಿ ಖಂಡಿಸಿದ್ದಕ್ಕಾಗಿ ಹಾಗೂ ಭಯೋತ್ಪಾದನೆ ವಿರುದ್ಧ ಶೂನ್ಯ ಸಹಿಷ್ಣುತೆಗೆ ಬೆಂಬಲ ನೀಡಿದ್ದಕ್ಕಾಗಿ ಅವರು ಶ್ಲಾಘಿಸಿದರು. ಈ ಭೇಟಿಯ ಸಮಯದಲ್ಲಿ ಸಚಿವ ಡಾ.ಎಸ್.ಜೈಶಂಕರ್ ಮೂರು ದೇಶಗಳ ನಾಯಕರನ್ನು ಭೇಟಿ ಮಾಡಲಿದ್ದಾರೆ. ಭಾರತದ ರಾಜತಾಂತ್ರಿಕ ಕಾರ್ಯತಂತ್ರದ ಸಂಬಂಧಗಳ ಬಲವರ್ಧನೆ, ಯೂರೋಪ್ ಜೊತೆಗಿನ ಸಹಕಾರ ವೃದ್ಧಿ, ತಂತ್ರದ ಪಾಲುದಾರಿಕೆ, ವ್ಯಾಪಾರ ಹೂಡಿಕೆ ಮತ್ತು ಪ್ರಾದೇಶಿಕ ಹಾಗೂ ಜಾಗತಿಕ ವಿಷಯಗಳ ಮೇಲೆ ಚರ್ಚಿಸುವುದು ಈ ಭೇಟಿಯ ಉದ್ದೇಶವಾಗಿದೆ.

***************

ಹೆಚ್ಚುವರಿ ನ್ಯಾಯಾಧೀಶರು ಸೇರಿದಂತೆ ಎಲ್ಲಾ ಹೈಕೋರ್ಟ್ ನ್ಯಾಯಾಧೀಶರು ಪೂರ್ಣ ಪಿಂಚಣಿ ಮತ್ತು ನಿವೃತ್ತಿ ಸೌಲಭ್ಯಗಳಿಗೆ ಅರ್ಹರಾಗಿರುತ್ತಾರೆ ಎಂದು ಸುಪ್ರೀಂ ಕೋರ್ಟ್ ಇಂದು ಮಹತ್ವದ ತೀರ್ಪು ನೀಡಿದೆ. ಹೈಕೋರ್ಟ್‌ನ ಮಾಜಿ ಮುಖ್ಯ ನ್ಯಾಯಮೂರ್ತಿಗಳು ವಾರ್ಷಿಕ ೧೫ ಲಕ್ಷ ರೂಪಾಯಿಗಳನ್ನು ಪಿಂಚಣಿಯಾಗಿ ಪಡೆಯುತ್ತಾರೆ ಎಂದು ಸುಪ್ರೀಂ ಕೋರ್ಟ್ ತಿಳಿಸಿದೆ.

***************

ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಇದೇ ತಿಂಗಳ ೨೫ ರಂದು ಆಕಾಶವಾಣಿಯ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ದೇಶ ಬಾಂಧವರೊಂದಿಗೆ ತಮ್ಮ ಆಲೋಚನೆಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಆಕಾಶವಾಣಿಯ ಮನ್ ಕಿ ಬಾತ್ ನ ೧೨೨ ನೇ ಸಂಚಿಕೆಯಾಗಲಿದೆ. ಟೋಲ್-ಫ್ರೀ ಸಂಖ್ಯೆ ೧೮೦೦-೧೧-೭೮೦೦ ಮೂಲಕ ಮನದಮಾತಿನ ಸಂಚಿಕೆಗೆ ಜನರು ತಮ್ಮ ಆಲೋಚನೆ, ಸಲಹೆಗಳನ್ನು ಸಲ್ಲಿಸಬಹುದು. ನರೇಂದ್ರ ಮೋದಿ ಅಪ್ಲಿಕೇಶನ್ ಅಥವಾ ಮೈಗೌ ಓಪನ್ ಫೋರಂ ಮೂಲಕ ಆನ್‌ಲೈನ್‌ನಲ್ಲಿ ಜನರು ತಮ್ಮ ಅನಿಸಿಕೆಗಳನ್ನು ಹಂಚಿಕೊಳ್ಳಬಹುದು. ಮುಂಬರುವ ಸಂಚಿಕೆಗೆ ಸಲಹೆಗಳನ್ನು ಈ ತಿಂಗಳ ೨೩ ರವರೆಗೆ ಸ್ವೀಕರಿಸಲಾಗುತ್ತದೆ.

***************

ಲಕ್ನೋದಲ್ಲಿ ನಿನ್ನೆ ರಾತ್ರಿ ನಡೆದ ಇಂಡಿಯನ್ ಪ್ರೀಮಿಯರ್ ಲೀಗ್ ಐಪಿಎಲ್ ಟಿ ೨೦ ೨೦೨೫ರ ಕ್ರಿಕೆಟ್ ಪಂದ್ಯದಲ್ಲಿ , ಲಕ್ನೋ ಸೂಪರ್ ಜೈಂಟ್ಸ್ ತಂಡ ಸನ್‌ರೈಸರ್ಸ್ ಹೈದರಾಬಾದ್ ವಿರುದ್ಧ ಆರು ವಿಕೆಟ್‌ಗಳಿಂದ ಸೋತು ಪ್ಲೇಆಫ್ ರೇಸ್‌ನಿಂದ ಹೊರಬಿದ್ದಿದೆ.ಇಂದು, ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ತಂಡ ರಾಜಸ್ಥಾನ ರಾಯಲ್ಸ್ ವಿರುದ್ಧ ಸೆಣಸಲಿದೆ. ಪಂದ್ಯ ಸಂಜೆ ೭:೩೦ ಕ್ಕೆ ಆರಂಭವಾಗಲಿದೆ.

***************

ಹವಾಮಾನ ಮುಂದಿನ ಎರಡು ದಿನಗಳಲ್ಲಿ ಅತಿಹೆಚ್ಚು ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕರ್ನಾಟಕ ಮತ್ತು ತಮಿಳುನಾಡು, ಕೊಂಕಣ ಗೋವಾ ಮತ್ತು ಮಹಾರಾಷ್ಟ್ರದ ಪಕ್ಕದ ಪ್ರದೇಶಗಳಿಗೆ ಮುಂದಿನ ೩ ದಿನಗಳಲ್ಲಿ ಅತಿ ಹೆಚ್ಚು ಮಳೆಯಾಗುವ ಸಾಧ್ಯತೆ ಇದೆ ಎಂದು ಹೇಳಿದೆ.

*************

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ನಿನ್ನೆ ನವದೆಹಲಿಯಲ್ಲಿ ಹೊಸ ಸಾಗರೋತ್ತರ ಭಾರತೀಯ ನಾಗರಿಕ ಪೋರ್ಟಲ್ ಅನ್ನು ಉದ್ಘಾಟಿಸಿದರು.ಈ ಹೊಸ ಪೋರ್ಟಲ್ ಅಸ್ತಿತ್ವದಲ್ಲಿರುವ ೫ ಮಿಲಿಯನ್‌ಗಿಂತಲೂ ಹೆಚ್ಚು ಸಾಗರೋತ್ತರ ಭಾರತೀಯ ನಾಗರಿಕ ಕಾರ್ಡ್‌ದಾರರು ಮತ್ತು ಹೊಸ ಬಳಕೆದಾರರಿಗೆ ಅಸ್ತಿತ್ವದಲ್ಲಿರುವ ನ್ಯೂನತೆಗಳನ್ನು ಸರಿಪಡಿಸಲು, ಸುಧಾರಿತ ಭದ್ರತೆ ಹಾಗೂ ಬಳಕೆದಾರ ಸ್ನೇಹಿ ಅನುಭವವನ್ನು ಕಲ್ಪಿಸಲಿದೆ ಎಂದರು.

*************

ಬೆಂಗಳೂರಿನಲ್ಲಿ ನಿನ್ನೆ ಸುರಿದ ಭಾರೀ ಮಳೆಯ ನಂತರ ಸಂಭವಿಸಿದ ಘಟನೆಗಳಲ್ಲಿ ಒಂಬತ್ತು ವರ್ಷದ ಬಾಲಕ ಸೇರಿದಂತೆ ಮೂವರು ಸಾವನ್ನಪ್ಪಿದ್ದಾರೆ ಎಂದು ವರದಿಯಾಗಿದೆ. ವೈಟ್‌ಫೀಲ್ಡ್‌ನಲ್ಲಿ ನಿನ್ನೆ ಬೆಳಿಗ್ಗೆ ಕಾಂಪೌಂಡ್ ಕುಸಿದು ಖಾಸಗಿ ಕಂಪನಿಯ ಉದ್ಯೋಗಿ ಶಶಿಕಲಾ ಸಾವನ್ನಪ್ಪಿದ್ದಾರೆ. ಅವರು ಚನ್ನಸಂದ್ರದ ಕಡೆಗೆ ನಡೆದುಕೊಂಡು ಹೋಗುತ್ತಿದ್ದಾಗ ಗೋಡೆ ಅವರ ಮೇಲೆ ಬಿದ್ದು ಸಾವನ್ನಪ್ಪಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶಶಿಕಲಾ ಅವರ ಕುಟುಂಬಕ್ಕೆ ಸರ್ಕಾರದಿಂದ ೫ ಲಕ್ಷ ರೂ. ಪರಿಹಾರವನ್ನು ಘೋಷಿಸಿದ್ದಾರೆ.

*************

ಮಹಾರಾಷ್ಟ್ರದ ರಾಷ್ಟ್ರೀಯವಾದಿ ಕಾಂಗ್ರೆಸ್ ಪಕ್ಷದ ಹಿರಿಯ ನಾಯಕ ಛಗನ್ ಭುಜಬಲ್ ಅವರನ್ನು ಇಂದು ರಾಜ್ಯ ಸಚಿವ ಸಂಪುಟಕ್ಕೆ ಸೇರ್ಪಡೆಮಾಡಿಕೊಳ್ಳಲಾಗುವುದು. ಬೆಳಿಗ್ಗೆ ೧೦ ಗಂಟೆಗೆ ಪ್ರಮಾಣ ವಚನ ಸ್ವೀಕಾರ ಸಮಾರಂಭ ನಡೆಯಲಿದೆ. ಏಕನಾಥ್ ಶಿಂಧೆ ನೇತೃತ್ವದ ಸಂಪುಟದಲ್ಲಿ ಅವರು ನಿರ್ವಹಿಸಿದ್ದ ಆಹಾರ ಮತ್ತು ನಾಗರಿಕ ಸರಬರಾಜು ಖಾತೆಯನ್ನು ಭುಜಬಲ್ ಅವರಿಗೆ ವಹಿಸುವ ನಿರೀಕ್ಷೆಯಿದೆ.

*************

ಸಿಂಧೂ ನದಿ ನೀರು ಒಪ್ಪಂದ ಸ್ಥಗಿತಗೊಳಿಸುವುದರಿಂದ ಜಮ್ಮು ಮತ್ತು ಕಾಶ್ಮೀರ, ರಾಜಸ್ಥಾನ, ಹರಿಯಾಣ, ಪಂಜಾಬ್ ಮತ್ತು ಹಿಮಾಚಲ ಪ್ರದೇಶದ ಹಲವು ಪ್ರದೇಶಗಳ ರೈತರಿಗೆ ಹೆಚ್ಚಿನ ಪ್ರಯೋಜನವಾಗುತ್ತದೆ ಎಂದು ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಪ್ರತಿಪಾದಿಸಿದ್ದಾರೆ. ನವದೆಹಲಿಯಲ್ಲಿ ದೇಶದ ವಿವಿಧ ರೈತರೊಂದಿಗೆ ನಡೆಸಿದ ಸಂವಾದದಲ್ಲಿ ನಡೆಸುವಾಗ ಸಚಿವರು ಈ ವಿಷಯ ತಿಳಿಸಿದರು. ಎಲ್ಲರಿಗೂ ಗರಿಷ್ಠ ಪ್ರಯೋಜನ ಖಾತರಿಪಡಿಸಲು ಭವಿಷ್ಯದಲ್ಲಿ ಈ ನೀರಿನ ಬಳಕೆಯ ಕುರಿತು ಸಮಗ್ರ ಕಾರ್ಯತಂತ್ರ ರೂಪಿಸಲಾಗುವುದು ಎಂದು ಸಚಿವ ಚೌಹಾಣ್ ಒತ್ತಿ ಹೇಳಿದ್ದಾರೆ.

*************

ಮಾರಾಟಗಾರರು ಮತ್ತು ಸೇವಾ ಪೂರೈಕೆದಾರರಿಗೆ ಲಭ್ಯವಿರುವ ವಿವಿಧ ವ್ಯಾಪಾರ ಅವಕಾಶಗಳ ಬಗ್ಗೆ ಮಾಹಿತಿ ಒದಗಿಸುವ ಕೇಂದ್ರ ಸರ್ಕಾರದ ಇ- ಮಾರುಕಟ್ಟೆ ಯೋಜನೆ ಜಿeಎಂ, ೨೦೪೭ರ ವಿಕಸಿತ ಭಾರತದ ಕಲ್ಪನೆಯ ಸಾಕಾರಕ್ಕೆ ಪ್ರಮುಖ ಹೆಜ್ಜೆಯಾಗಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ಆಂಗ್ಲ ಪತ್ರಿಕೆಯೊಂದರಲ್ಲಿ ತಾವು ಬರೆದಿರುವ ಲೇಖನವನ್ನು ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿರುವ ಸಚಿವರು, ಇ-ಮಾರುಕಟ್ಟೆಯು ಸಾರ್ವಜನಿಕ ಸಂಗ್ರಹಣೆ ಪ್ರಕ್ರಿಯೆಯನ್ನು ಪಾರದರ್ಶಕ, ಪರಿಣಾಮಕಾರಿಯಾಗಿ ನಿರ್ವಹಿಸುತ್ತಿದೆ. ಇದು ಸರ್ಕಾರಿ ಖರೀದಿದಾರರು ಹಾಗೂ ಸರಕು ಮತ್ತು ಸೇವೆಗಳ ಪೂರೈಕೆದಾರರಿಗೆ ಕೇಂದ್ರೀಕೃತ ಮತ್ತು ಏಕೀಕೃತ ಸಾರ್ವಜನಿಕ ಸಂಗ್ರಹಣೆ ವೇದಿಕೆಯಾಗಿ ಕಾರ್ಯನಿರ್ವಹಿಸುತ್ತಿದೆ ಎಂದಿದ್ದಾರೆ. ಈ ವೇದಿಕೆ ಭ್ರಷ್ಟಾಚಾರ ನಿವಾರಿಸುವ ಜೊತೆಗೆ, ತೆರಿಗೆದಾರರ ಹಣ ಬೃಹತ್ ಪ್ರಮಾಣದಲ್ಲಿ ಉಳಿಸಲು ಅನುವು ಮಾಡಿಕೊಟ್ಟಿದೆ. ಪ್ರಾಮಾಣಿಕ ವ್ಯವಹಾರಗಳಿಗೆ ಹೆಚ್ಚಿನ ಅವಕಾಶ ಒದಗಿಸಿದೆ. ಪ್ರಧಾನಿ ನರೇಂದ್ರ ಮೋದಿ ಅವರ 'ಸಬ್‌ಕಾ ಸಾಥ್, ಸಬ್‌ಕಾ ವಿಕಾಸ್' ಎಂಬ ಧ್ಯೇಯಕ್ಕೆ ಅನುಗುಣವಾಗಿ ಇದು ಸಮಾನ ಬೆಳವಣಿಗೆಯ ನಿರ್ಣಾಯಕ ಪಾತ್ರ ವಹಿಸುತ್ತಿದೆ ಎಂದು ಸಚಿವರು ತಿಳಿಸಿದ್ದಾರೆ. ನವೋದ್ಯಮಗಳು, ಸಣ್ಣ ಮತ್ತು ಮಹಿಳಾ ನೇತೃತ್ವದ ಉದ್ಯಮಗಳಿಗೆ ಯಾವುದೇ ಮಧ್ಯವರ್ತಿಗಳಿಲ್ಲದೆ ಸರ್ಕಾರಿ ಖರೀದಿದಾರರಿಗೆ ತಮ್ಮ ಉತ್ಪನ್ನಗಳು ಮತ್ತು ಸೇವೆಗಳನ್ನು ಒದಗಿಸಲು ಜಿeಎಂ ಸುಲಭ ಮಾರ್ಗವನ್ನು ಒದಗಿಸುತ್ತದೆ ಎಂದು ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ.

*******END********